ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ಇತರೆ ಪರೀಕ್ಷೆಗಳು), ಮಲ್ಲೇಶ್ವರಂ, ಬೆಂಗಳೂರು-3.**

ಸಂಖ್ಯೆ:ಎಸ್1/ವಾ.ಪ/ಜನವರಿ-2020/01/2019-20 ದಿನಾಂಕ: 07.12.2019

**-: ಅಧಿಸೂಚನೆ :-**

ವಿಷಯ: ಜನವರಿ-2020 ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಆಯುಕ್ತರು, ಸಾ.ಶಿ.ಇಲಾಖೆ ಮತ್ತು ಅಧ್ಯಕ್ಷರು, ಕ.ಪ್ರೌ.ಶಿ.ಪ.ಮಂಡಳಿ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 02.01.2019ರಂದು ನಡೆದ ಸಭಾ ನಡಾವಳಿ.

***

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಇತರೆ ಪರೀಕ್ಷೆಗಳ ವಿಭಾಗದಿಂದ ಜನವರಿ-2020 ಮಾಹೆಯಲ್ಲಿ ನಡೆಯುವ ವಾಣಿಜ್ಯ ಪರೀಕ್ಷೆಗೆ ರಾಜ್ಯದ ಮಾನ್ಯತೆ ಪಡೆದ ವಾಣಿಜ್ಯ ಸಂಸ್ಥೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪರೀಕ್ಷೆಗೆ ಹಾಜರಾಗಲು ಅರ್ಜಿಗಳನ್ನು ಸಂಬಂಧಿಸಿದ ವಾಣಿಜ್ಯ ಸಂಸ್ಥೆಗಳ ಮುಖಾಂತರ ಸಲ್ಲಿಸಬಹುದಾಗಿದೆ. ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಿಂದ ಹಾಜರಾಗುವ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು ಮಂಡಳಿಯ www.kseeb.kar.nic.in ಜಾಲತಾಣದಲ್ಲಿ ಸಂಸ್ಥೆಯ login ಮೂಲಕ Upload ಮಾಡಲು ಸೂಚಿಸಿದೆ.

**ವಾಣಿಜ್ಯ ಪರೀಕ್ಷೆ ತೆಗೆದುಕೊಳ್ಳಲು ಅಗತ್ಯವಿರುವ ಅರ್ಹತೆ:-**

- ಸರ್ಕಾರಿ ಆದೇಶ ಸಂಖ್ಯೆ: ಇಡಿ4 ಎಲ್‌ಸಿಇ 2002, ಬೆಂಗಳೂರು ದಿನಾಂಕ: 28.01.2003ರ ಎಸ್.ಎಸ್.ಎಲ್.ಸಿ./ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣ/ಅನುತ್ತೀರ್ಣರಾದ ವಿದ್ಯಾರ್ಥಿಗಳು ಆಂಗ್ಲ ಅಥವಾ ಕನ್ನಡ ಬೆರಳಚ್ಚು ಪ್ರಥಮ ದರ್ಜೆ ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆದಿರುತ್ತಾರೆ.
- ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಪರೀಕ್ಷೆ ತೆಗೆದುಕೊಳ್ಳಲು ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿ 10 ತಿಂಗಳು ಪೂರ್ಣಗೊಳಿಸಿರಬೇಕು.
- ಆಂಗ್ಲ ಮತ್ತು ಕನ್ನಡ ಶೀಘ್ರಲಿಪಿ ಪ್ರಥಮದರ್ಜೆ ಪರೀಕ್ಷೆ ತೆಗೆದುಕೊಳ್ಳಲು ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
- ಆಂಗ್ಲ ಶೀಘ್ರಲಿಪಿ ಮಧ್ಯಮ ದರ್ಜೆ ಪರೀಕ್ಷೆ ತೆಗೆದುಕೊಳ್ಳಲು ಎಸ್.ಎಸ್.ಎಲ್.ಸಿ/ತತ್ಸಮಾನ ಮತ್ತು ಆಂಗ್ಲ ಶೀಘ್ರಲಿಪಿ ಪ್ರಥಮ ದರ್ಜೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
- ಪ್ರೌಢದರ್ಜೆ ಶೀಘ್ರಲಿಪಿ ಪರೀಕ್ಷೆಗಳನ್ನು ಕಟ್ಟಲು ಪ್ರಥಮ ದರ್ಜೆ ಶೀಘ್ರಲಿಪಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ 10 ತಿಂಗಳು ಪೂರ್ಣಗೊಳಿಸಿರಬೇಕು.
- ಆಂಗ್ಲ/ಕನ್ನಡ ಶೀಘ್ರಲಿಪಿ ಪ್ರವೀಣ ದರ್ಜೆ ಪರೀಕ್ಷೆ ತೆಗೆದುಕೊಳ್ಳಲು ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆ ಮತ್ತು ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
- ಡಿಪ್ಲೋಮಾ ಇನ್ ಸೆಕ್ರೆಟರಿಯಲ್ ಪ್ರಾಕ್ಟೀಸ್ ಕೋರ್ಸ್‌ನಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ನೇರವಾಗಿ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರವೀಣ ದರ್ಜೆ ಪರೀಕ್ಷೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹಾಗೂ ಕನ್ನಡ/ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ/ಪ್ರವೀಣ ದರ್ಜೆಗೆ ಅರ್ಜಿ ಸಲ್ಲಿಸಬಹುದಾಗಿದೆ.
- ಮುದ್ರಣ ಪರೀಕ್ಷೆ ತೆಗೆದುಕೊಳ್ಳಲು 7ನೇ ತರಗತಿ/ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಹಾಗೂ ಸರ್ಕಾರಿ ಮುದ್ರಣಾಲಯದ ಖಾಯಂ ನೌಕರರಾಗಿಬೇಕು.

- ಆಂಗ್ಲ ಮತ್ತು ಕನ್ನಡ ಬೆರಳಚ್ಚು ಪರೀಕ್ಷೆಗಳಿಗೆ ತಂಡಗಳನ್ನು(ಬ್ಯಾಚ್) ಸರಿಯಾಗಿ ನಮೂದಿಸಬೇಕು. ಪ್ರಥಮ ದರ್ಜೆಗೆ ಎ,ಬಿ,ಸಿ,ಡಿ,ಇ ತಂಡಗಳೆಂದೂ, ಪ್ರೌಢದರ್ಜೆಗೆ ಎ,ಬಿ,ಸಿ,ಡಿ ತಂಡಗಳೆಂದು ವಿಂಗಡಿಸಿ ನಮೂದಿಸಬೇಕು. ಯಾವುದೇ ಕಾರಣಕ್ಕೂ ತಂಡ ಬದಲಾವಣೆಗೆ ಅವಕಾಶವಿರುವುದಿಲ್ಲ.
- ಆಂಗ್ಲ ಶೀಘ್ರಲಿಪಿ ಪ್ರವೀಣ ದರ್ಜೆ(ವಿಷಯ ಸಂಕೇತ 11 XYZ) ಮತ್ತು ಕನ್ನಡ ಶೀಘ್ರಲಿಪಿ ಪ್ರವೀಣ ದರ್ಜೆ (ವಿಷಯ ಸಂಕೇತ(16 XYZ) ಪರೀಕ್ಷೆಗಳು, ವಾಣಿಜ್ಯ ಪರೀಕ್ಷಾ ಕೇಂದ್ರ 009-AN ಡಯಟ್ ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಜಾಜಿನಗರ, ಬೆಂಗಳೂರು ಇಲ್ಲಿ ಮಾತ್ರ ನಡೆಸಲಾಗುತ್ತದೆ.
- ಮುದ್ರಣ ಪರೀಕ್ಷೆಗಳು 03-AS ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಆರ್.ವಿ.ಕಾಲೇಜು ಅಂಚೆ, ಬೆಂಗಳೂರು ಇಲ್ಲಿ ಮಾತ್ರ ನಡೆಸಲಾಗುತ್ತದೆ.
- ಫಲಿತಾಂಶ ಉತ್ತಮ ಪಡಿಸಿಕೊಳ್ಳ ಬಯಸುವ ಅಭ್ಯರ್ಥಿಗಳು ಮಂಡಳಿಯಿಂದ ಅನುಮತಿ ಪಡೆದು ಈ ಹಿಂದೆ ವ್ಯಾಸಂಗ ಮಾಡಿದ್ದ ಸಂಸ್ಥೆಯಿಂದಲೇ ಅರ್ಜಿ ಸಲ್ಲಿಸಬೇಕು. ಸಂಸ್ಥೆಯ ಪ್ರಾಚಾರ್ಯರ ಹಂತದಲ್ಲಿ ಕೇಂದ್ರಗಳ ಬದಲಾವಣೆಗೆ ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಜೂನಿಯರ್ ಪರೀಕ್ಷೆ ಉತ್ತೀರ್ಣರಾಗದೇ ನೇರವಾಗಿ ಪ್ರೌಢದರ್ಜೆ ಪರೀಕ್ಷೆ ತೆಗೆದುಕೊಳ್ಳುವಂತಿಲ್ಲ ಹಾಗೂ ಎರಡೂ ಪರೀಕ್ಷೆಗಳನ್ನು ಒಂದೇ ಬಾರಿ ತೆಗೆದುಕೊಳ್ಳಲು ಅವಕಾಶವಿಲ್ಲ.
- ವಾಣಿಜ್ಯ ಸಂಸ್ಥೆಯವರು ವಾರ್ಷಿಕ ನವೀಕರಣ ಶುಲ್ಕ ರೂ.205-00ನ್ನು ನೆಫ್ಟ್ ಮೂಲಕ ಪಾವತಿಸುವುದು. ಈಗಾಗಲೇ ಪಾವತಿಸಿದಲ್ಲಿ ಚಲನ್‌ನ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಿ ಮಂಡಳಿಗೆ ಕಳುಹಿಸುವುದು. ವಾರ್ಷಿಕ ನವೀಕರಣ ಶುಲ್ಕ ಪಾವತಿಸದ ವಾಣಿಜ್ಯ ಸಂಸ್ಥೆಯ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

<u>**ಪರೀಕ್ಷಾ ವಿಷಯಗಳು:**</u>

| ಪರೀಕ್ಷಾ ವಿಷಯಗಳು | ಜನವರಿ-2020ರ ಅವಧಿಯಲ್ಲಿ ನಡೆಸಲಾಗುವ ವಾಣಿಜ್ಯ ಪರೀಕ್ಷೆಯ ವಿಷಯ ಸಂಕೇತ ಮತ್ತು ದರ್ಜೆಗಳು | |
|---|---|---|
| | ವಿಷಯ ಸಂಕೇತದ ಸಂಖ್ಯೆ | ದರ್ಜೆ |
| ಆಂಗ್ಲ ಮತ್ತು ಕನ್ನಡ ಬೆರಳಚ್ಚು | 03 XY, 08 XY | ಪ್ರೌಢ ದರ್ಜೆ |
| | 05 XY, 10 XY | ಪ್ರಥಮ ದರ್ಜೆ |
| ಆಂಗ್ಲ ಶೀಘ್ರಲಿಪಿ | 11 XYZ | ಪ್ರವೀಣ ದರ್ಜೆ |
| | 13 XYZ | ಪ್ರೌಢ ದರ್ಜೆ |
| | 14 XY | ಮಧ್ಯಮ ದರ್ಜೆ |
| | 15 XY | ಪ್ರಥಮ ದರ್ಜೆ |
| ಕನ್ನಡ ಶೀಘ್ರಲಿಪಿ | 16 XYZ | ಪ್ರವೀಣ ದರ್ಜೆ |
| | 18 XYZ | ಪ್ರೌಢದರ್ಜೆ |
| | 20 XY | ಪ್ರಥಮ ದರ್ಜೆ |
| ಮುದ್ರಣ ಪರೀಕ್ಷೆಗಳು | 31 X, 33XY, 35XY, 37XY | ಪ್ರೌಢದರ್ಜೆ |
| | 32X, 34XY, 36XY, 38XY | ಪ್ರಥಮ ದರ್ಜೆ |

## ವಿಷಯವಾರು ಪರೀಕ್ಷಾ ಶುಲ್ಕದ ವಿವರಗಳು

| ಕ್ರಸಂ | ವಿಷಯಗಳು | ಪ್ರಥಮದರ್ಜೆ | ಮಧ್ಯಮ ದರ್ಜೆ | ಪ್ರೌಢ ದರ್ಜೆ | ಪ್ರವೀಣ ದರ್ಜೆ |
|---|---|---|---|---|---|
| 1. | ಆಂಗ್ಲ ಮತ್ತು ಕನ್ನಡ ಬೆರಳಚ್ಚು | 390–00 | – | 430–00 | – |
| 2. | ಆಂಗ್ಲ ಶೀಘ್ರಲಿಪಿ | 430–00 | 456–00 | 468–00 | 624–00 |
| 3. | ಕನ್ನಡ ಶೀಘ್ರಲಿಪಿ | 430–00 | – | 468–00 | 624–00 |
| 4 | ಮುದ್ರಣ ಪರೀಕ್ಷೆಗಳು | 468–00 | – | 499–00 | – |

ಮೇಲಿನ ಶುಲ್ಕಗಳ ಜೊತೆಗೆ ಲ್ಯಾಮಿನೇಶನ್ ಶುಲ್ಕ ರೂ.20/–ಗಳನ್ನು ಸೇರಿಸಿ ಪಾವತಿಸಬೇಕಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ಇದ್ದು, ಅರ್ಜಿ ಶುಲ್ಕ, ಅಂಕಪಟ್ಟಿ ಶುಲ್ಕ, ಹಾಗೂ ಲ್ಯಾಮಿನೇಶನ್ ಶುಲ್ಕ ಒಟ್ಟು ರೂ.30/–ಗಳನ್ನು ಪಾವತಿಸಬೇಕಾಗುತ್ತದೆ.

## ನೆಫ್ಟ್ ಚಲನ್ ಹಾಗೂ ಅರ್ಜಿಗಳನ್ನು ಸಲ್ಲಿಸಲು ನಿಗಧಿಗೊಳಿಸಿರುವ ದಿನಾಂಕಗಳ ವಿವರ

| ಕ್ರ ಸಂ | ವಿವರ | ನಿಗಧಿಪಡಿಸಿರುವ ದಿನಾಂಕ |
|---|---|---|
| 01 | ಮಂಡಳಿ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಪ್ರಾರಂಭದ ದಿನಾಂಕ** | 10.12.2019 |
| 02 | ಮಂಡಳಿ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಅಂತಿಮ ದಿನಾಂಕ** | 20.12.2019 |
| 03 | ಮಂಡಳಿ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಂಡು ನೆಫ್ಟ್ ಮೂಲಕ ಬ್ಯಾಂಕ್‌ಗೆ ಜಮಾ ಮಾಡಲು ನಿಗಧಿಪಡಿಸಿದ ದಿನಾಂಕ | 24.12.2019 |
| 04 | ನಾಮಿನಲ್ ರೋಲ್, ಶುಲ್ಕ ಪಾವತಿಸಿದ ಚಲನ್‌ನ ಮೂಲ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಮಂಡಳಿಗೆ ಕಳುಹಿಸಲು **ಕೊನೆಯ ದಿನಾಂಕ** | 27.12.2019 |

## ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ

ಅಭ್ಯರ್ಥಿಗಳ ಪರೀಕ್ಷಾ ನೋಂದಣಿಯನ್ನು ವಾಣಿಜ್ಯ ಸಂಸ್ಥೆಯ ಪ್ರಾಚಾರ್ಯರು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ನೋಂದಣಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆವಾರು ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್‌ನಲ್ಲಿ ಚಲನ್ ಜನರೇಟ್ ಮಾಡುವ ವ್ಯವಸ್ಥೆ ಮಾಡಲಾಗಿದೆ. ಸದರಿ ಚಲನ್ ಅನ್ನು ಸಂಸ್ಥೆಯ login ನಿಂದ ಡೌನ್‌ಲೋಡ್ ಮಾಡಿಕೊಂಡು ಅದರಲ್ಲಿ ನಮೂದಿಸಿರುವ ಮೊತ್ತವನ್ನು ಅದೇ ಚಲನ್ ಬಳಸಿ ನಿಗದಿತ ಅವಧಿಯಲ್ಲಿ ನೆಫ್ಟ್ ಮೂಲಕ ಶುಲ್ಕವನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸುವುದು.

ಪರೀಕ್ಷಾ ಶುಲ್ಕವನ್ನು ಪ್ರಸಕ್ತ ಸಾಲಿನಲ್ಲಿ ಕಡ್ಡಾಯವಾಗಿ ಸಂಸ್ಥೆಯ ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವ ನೆಫ್ಟ್ ಚಲನ್ ಡೌನ್‌ಲೋಡ್ ಮಾಡಿಕೊಂಡು ಬ್ಯಾಂಕ್ ಮುಖಾಂತರ ಪಾವತಿಸಬೇಕಾಗಿರುತ್ತದೆ. ಆನ್‌ಲೈನ್ ಚಲನ್ ಹೊರತುಪಡಿಸಿ ಮತ್ಯಾವುದೇ ಚಲನ್, ಡಿ.ಡಿ, ಚೆಕ್ ಮೂಲಕ ಮಾಡಲಾದ ಪಾವತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

<u>ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸುವಾಗ ಸಂಸ್ಥೆಯ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:-</u>

- ವಾಣಿಜ್ಯ ಸಂಸ್ಥೆಯ ಪ್ರಸಕ್ತ ವರ್ಷದ ಮಾನ್ಯತೆ/ಮಾನ್ಯತೆ ನವೀಕರಣ ಪಡೆದಿರುವುದಕ್ಕೆ ಸಂಬಂಧಿಸಿದ ಸಹನಿರ್ದೇಶಕರಿಂದ ಪಡೆದ ಜ್ಞಾಪನ ಪ್ರತಿಯನ್ನು ಕಡ್ಡಾಯವಾಗಿ pdf ನಮೂನೆ(1mb size)ಯಲ್ಲಿ Upload ಮಾಡಬೇಕು. ಇದನ್ನು ಮಂಡಳಿಯಿಂದ ಅನುಮೋದಿಸಿದ ನಂತರವಷ್ಟೇ ಆನ್‌ಲೈನ್ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ.
- ಜನವರಿ 2020ರ ವಾಣಿಜ್ಯ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ನೋಂದಣಿ ಮಾಹಿತಿಯನ್ನು ಮಂಡಳಿ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮುಖಾಂತರ ಅಪ್‌ಲೋಡ್ ಮಾಡುವುದು.
- ಶುಲ್ಕ ವಿನಾಯಿತಿ ಪಡೆಯಲು ಬಯಸುವ ವಿದ್ಯಾರ್ಥಿಗಳಿಂದ ಕಡ್ಡಾಯವಾಗಿ ನಿಗಧಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ಪಡೆದು, ಅದರ ನಿಗಧಿತ ಕಾಲಂನಲ್ಲಿ ಪ್ರಮಾಣ ಪತ್ರದ ಸಂಖ್ಯೆಯನ್ನು ನಮೂದಿಸಬೇಕು.
- 2003 ಹಾಗೂ ಇದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳ ಹಾಗೂ ತತ್ಸಮಾನ ಪರೀಕ್ಷೆಗಳ ಅಂಕಪಟ್ಟಿಗಳನ್ನು ಪರಿಶೀಲಿಸಿ ಸೂಕ್ತ ಕಾಲಂನಲ್ಲಿ pdf ನಮೂನೆ(1mb size)ಯಲ್ಲಿ Upload ಮಾಡಬೇಕು.
- 2003ರ ಹಾಗೂ 2003ರ ನಂತರದ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡುವಾಗ ಎಸ್.ಎಸ್.ಎಲ್.ಸಿ ನೊಂದಣಿ ಸಂಖ್ಯೆಯನ್ನು ನಮೂದಿಸಿದಾಗ ಮಾಹಿತಿಗಳು AUTO FETCH ಆಗುತ್ತವೆ. ಉಳಿದ ಮಾಹಿತಿಗಳನ್ನು ಸಂಸ್ಥೆಯ ಮುಖ್ಯಸ್ಥರು ಭರ್ತಿ ಮಾಡುವುದು.
- ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಬಯಸುವ ಅಭ್ಯರ್ಥಿಗಳು ಮಂಡಳಿಯಿಂದ ಅನುಮತಿ ಪಡೆದು ಈ ಹಿಂದೆ ವ್ಯಾಸಂಗ ಮಾಡಿದ್ದ ಸಂಸ್ಥೆಯಿಂದಲೇ ಅರ್ಜಿ ಸಲ್ಲಿಸಬೇಕು. ಮಂಡಳಿಯ ಅನುಮತಿ ಪತ್ರದ ಸಂಖ್ಯೆಯನ್ನು ನಿಗಧಿತ ಕಾಲಂ ನಲ್ಲಿ ನಮೂದಿಸಬೇಕು.
- ಅರ್ಜಿಗಳನ್ನು ಸ್ವೀಕರಿಸುವ ಅಂತಿಮ ದಿನಾಂಕದ ನಂತರ ಅರ್ಜಿಯಲ್ಲಿ ಅಭ್ಯರ್ಥಿಗಳ ಮಾಹಿತಿಯನ್ನು ತಿದ್ದುಪಡಿ ಮಾಡಬೇಕಾದಲ್ಲಿ ಮಂಡಳಿ ನಿಗಧಿಪಡಿಸಿದ ಅವಧಿಯಲ್ಲಿ ಮಾತ್ರ ತಿದ್ದುಪಡಿ ಮಾಡಿಕೊಳ್ಳತಕ್ಕದ್ದು.
- ಎಸ್.ಎಸ್.ಎಲ್.ಸಿ. ನೊಂದಣಿ ಸಂಖ್ಯೆ ಮೂಲಕ **FETCH** ಆದ ಮಾಹಿತಿಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಇರುವುದಿಲ್ಲ.
- **ಪ್ರಥಮ ಬಾರಿಗೆ ಗಣಕೀಕರಣ ವ್ಯವಸ್ಥೆಗೆ ಪರೀಕ್ಷೆಯನ್ನು ಒಳಪಡಿಸುತ್ತಿದ್ದು, ಭೌತಿಕವಾಗಿ ಯಾವುದೇ ರೀತಿಯ ತಿದ್ದುಪಡಿಗೆ ಅವಕಾಶವಿರುವುದಿಲ್ಲ.**
- **ಮಂಡಳಿಯ ಗಮನಕ್ಕೆ ತರದೇ ಪರೀಕ್ಷಾ ಕೇಂದ್ರಗಳಲ್ಲಿ ಬದಲಾವಣೆ ಮಾಡಿಕೊಂಡು ಪರೀಕ್ಷೆಗೆ ಹಾಜರು ಪಡಿಸಿದಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದಿಲ್ಲ. ಹಾಗೂ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಪ್ರಾಚಾರ್ಯರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.**
- ಆನ್‌ಲೈನ್‌ನಲ್ಲಿ ಪರೀಕ್ಷಾ ಕೇಂದ್ರ ಆಯ್ಕೆ ಮಾಡುವ ಮೊದಲು ಸರಿಯಾಗಿ ಪರಿಶೀಲಿಸಿಕೊಂಡು ಆಯ್ಕೆ ಮಾಡುವುದು. ಒಮ್ಮೆ ಆಯ್ಕೆ ಮಾಡಿದ ನಂತರ ಬದಲಾವಣೆಗೆ ಅವಕಾಶ ಇರುವುದಿಲ್ಲ. ಒಂದು ವೇಳೆ ಆಯ್ಕೆ ಮಾಡಲಾದ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳ ಸಂಖ್ಯೆಯು ಕೇಂದ್ರ ಸ್ಥಾಪಿಸಲು ಅಗತ್ಯ ಸಂಖ್ಯೆಗಿಂತ ಕಡಿಮೆ ಇದ್ದಲ್ಲಿ ಮಂಡಳಿಯ ಹಂತದಲ್ಲಿ ಅಕ್ಕಪಕ್ಕದ ಕೇಂದ್ರಗಳಿಗೆ ವಿಲೀನಗೊಳಿಸಿ ಕೇಂದ್ರವನ್ನು ಬದಲಾಯಿಸಲಾಗುವುದು.
- ಸಂಸ್ಥೆಯ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ನಾಮಾಯಾದಿ ಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಂಡು ಪರಿಶೀಲಿಸಿ ಮೂಲ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು.

- ಅಭ್ಯರ್ಥಿಗಳು ಅರ್ಜಿಯನ್ನು ನೋಂದಾಯಿಸಿದ ವಾಣಿಜ್ಯ ಸಂಸ್ಥೆಯ ಲಾಗಿನ್‌ಗೆ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಅಪ್‌ಲೋಡ್ ಮಾಡಲಾಗುವುದು. ಪರೀಕ್ಷೆಗೆ ನೋಂದಾಯಿಸಿದ ಅಭ್ಯರ್ಥಿಗಳು ಸದರಿ ವಾಣಿಜ್ಯ ಸಂಸ್ಥೆಯಿಂದಲೇ ಪ್ರವೇಶ ಪತ್ರಗಳನ್ನು ಪಡೆಯುವುದು.

ಮೇಲಿನ ಎಲ್ಲಾ ಸೂಚನೆಗಳನ್ನು ಸಂಬಂಧಪಟ್ಟ ವಾಣಿಜ್ಯ ಸಂಸ್ಥೆಯ ಮುಖ್ಯಸ್ಥರು ತಪ್ಪದೇ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದಿದ್ದಲ್ಲಿ ಹಾಗೂ ತಪ್ಪು ಮಾಹಿತಿ/ದಾಖಲೆಗಳನ್ನು ಅಪ್‌ಲೋಡ್ ಮಾಡಿದಲ್ಲಿ ಮುಂದಿನ ತೊಂದರೆಗಳಿಗೆ ಸಂಬಂಧಿಸಿದ ಸಂಸ್ಥೆಯ ಪ್ರಾಚಾರ್ಯರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

- **<u>ವಿಶೇಷ ಸೂಚನೆ:-</u> ಪರೀಕ್ಷಾ ಅರ್ಜಿಗಳನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಸಲ್ಲಿಸುವ ಸಮಯದಲ್ಲಿ ವಿದ್ಯಾರ್ಥಿಗಳ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿ ಅಪ್‌ಲೋಡ್ ಮಾಡುವುದು.**
- **ಭಾವಚಿತ್ರವನ್ನು ಮಾತ್ರವೇ ಸ್ಕ್ಯಾನ್ ಮಾಡಿಕೊಂಡು ಅಪ್‌ಲೋಡ್ ಮಾಡಬೇಕೇ ಹೊರತು ಇಡೀ ಪೇಪರ್ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಂತಿಲ್ಲ.**

**<u>ಜನವರಿ-2020ರ ವಾಣಿಜ್ಯ ಪರೀಕ್ಷೆಗೆ ಈ ಕೆಳಕಂಡ ದಾಖಲೆಗಳನ್ನು ಸಂಸ್ಥೆಯ ಪ್ರಾಚಾರ್ಯರು ದಿನಾಂಕ: 27.12.2019 ರೊಳಗೆ ಸಲ್ಲಿಸುವುದು ಕಡ್ಡಾಯ.</u>**

1. ಮುಖಪುಟ (Covering letter).
2. ಶುಲ್ಕ ಪಾವತಿಸಿದ ಮೂಲ ನೆಫ್ಟ್ ಚಲನ್.
3. ನಾಮಯಾದಿ ಪಟ್ಟಿ (Nominal Roll).

ಜನವರಿ-2020ರ ವಾಣಿಜ್ಯ ಪರೀಕ್ಷೆಗೆ ಮೇಲ್ಕಂಡ ದಾಖಲೆಗಳನ್ನು ಖುದ್ದಾಗಿ ಅಥವಾ ರಿಜಿಸ್ಟರ್ಡ್ ಅಂಚೆ ಮೂಲಕ ಈ ಕೆಳಕಂಡ ವಿಳಾಸಕ್ಕೆ ದಿನಾಂಕ: 27.12.2019ರೊಳಗಾಗಿ ತಲುಪಿಸುವುದು.

ಶ್ರೀಮತಿ ಹೇಮಲತಾ ಡಿ ನಾಯಕ್,
ಸಹಾಯಕ ನಿರ್ದೇಶಕರು ಮತ್ತು ಶಾಖಾಧಿಕಾರಿಗಳು,
ವಾಣಿಜ್ಯ ಶಾಖೆ, 4ನೇ ಮಹಡಿ,
ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ,
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03
ಮೊಬೈಲ್ ಸಂಖ್ಯೆ: **8073708153**
ಮಂಡಳಿಯ ದೂರವಾಣಿ ಸಂಖ್ಯೆ:**080-23360073**
ಇ-ಮೇಲ್ ವಿಳಾಸ:**dpioekseeb@gmail.com**

**ಹೆಚ್ಚಿನ ವಿವರಗಳಿಗಾಗಿ ಈ ಕೆಳಕಂಡ ಮಂಡಳಿಯ ಜಾಲತಾಣವನ್ನು ನೋಡುವುದು.**

**www.kseeb.kar.nic.in**

**ಸೂಚನೆ:- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಗೆ ಸಂಬಂಧಿಸಿದಂತೆ Flow chart ಹಾಗೂ User Manual ಸಂಸ್ಥೆಯ ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವುದು. ಅದರಂತೆ ಕ್ರಮವಹಿಸಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ Upload ಮಾಡುವುದು.**

7/12/19
(ವಿ.ಸುಮಂಗಲ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

<u>ಪ್ರತಿಯನ್ನು:-</u>

1. ಮಾನ್ಯ ಆಯುಕ್ತರ ಆಪ್ತ ಶಾಖೆಗೆ ಮಾಹಿತಿಗಾಗಿ,
2. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ, ಸೂಕ್ತ ಕ್ರಮಕ್ಕಾಗಿ.

3. ರಾಜ್ಯದ ಎಲ್ಲಾ ನೋಡಲ್ ಅಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
4. ಹಿರಿಯ ಸಹಾಯಕ ನಿರ್ದೇಶಕರು (ವಾಣಿಜ್ಯ ಪರೀಕ್ಷೆಗಳು) ಆಯುಕ್ತರ ಕಛೇರಿ, ಬೆಂಗಳೂರು, ವಿಭಾಗೀಯ ಆಯುಕ್ತರ ಕಛೇರಿ, ಧಾರವಾಡ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
5. ವಿಭಾಗೀಯ ಸಹನಿರ್ದೇಶಕರು, ಸಾ.ಶಿ.ಇಲಾಖೆ, ಬೆಂಗಳೂರು, ಮೈಸೂರು, ಬೆಳಗಾಂ ಮತ್ತು ಕಲಬುರಗಿ ರವರಿಗೆ ಅಗತ್ಯ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು, ಗಣಕ ಶಾಖೆ.
7. ಕಛೇರಿ ಪ್ರತಿ.